**ಓ.ಎಸ್ಃ 258/2023** **ಪಿಡಬ್ಲೂ–3 ಎಂ ಶಿವಶಂಕರ**

ದಿನಾಂಕಃ 19.01.2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಭೋಧಿಸಲಾಯಿತು.

**ಪಾಟಿ ಸವಾಲುಃ ಪ್ರತಿವಾದಿ ಪರ ಶ್ರೀ ಎಲ್ ಎಸ್ ವಕೀಲರಿಂದಃ**

ನನಗೆ ವಾದಿ 8–10 ವರ್ಷಗಳಿಂದ ಪರಿಚಯ ಇರುತ್ತಾರೆ. ವಾದಿ ಏನು ಕೆಲಸ ಮಾಡುತ್ತಾರೆ ಎಂದು ನನಗೆ ಗೊತ್ತಿಲ್ಲ. ನಿಪಿ 1 ರ ಕರಾರು ಪತ್ರದಲ್ಲಿ ನಮೂದಿಸಿರುವ ವಿಚಾರಗಳನ್ನು ತಿಳಿದುಕೊಂಡು ಸಹಿ ಮಾಡಿರುತ್ತೇನೆ. ನಿಪಿ 1 ರ ಕರಾರು ಪತ್ರದಲ್ಲಿ ಕ್ರಯ ಪತ್ರ ಬರೆದುಕೊಡಲು ಸಮಯ ನಿಗದಿ ಮಾಡಿದ ಬಗ್ಗೆ ನನಗೆ ಗೊತ್ತಿಲ್ಲ ಎಂದರೆ ಸರಿ. ದಾವಾ ಆಸ್ತಿಯ ಖರೀದಿಯ ವಿಚಾರ ನನಗೆ ಗೊತ್ತಿಲ್ಲದಿದ್ದರೂ ಸಹ ವಾದಿ ನನ್ನ ಸ್ನೇಹಿತರಾಗಿರುವುದರಿಂದ ನಿಪಿ 1 ರ ಕರಾರು ಪತ್ರಕ್ಕೆ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ವಾದಿ ನನಗೆ ಪರಿಚಯಸ್ಥನಾದ್ದರಿಂದ ಆತನ ಪರವಾಗಿ ನ್ಯಾಯಾಲಯದಲ್ಲಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ ಇಲ್ಲ.

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು)

ಓ ಹೇ ಕೇ ಸರಿ ಇದೆ

1ನೇ ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ. ಚಾಮರಾಜನಗರ.

**ಓ.ಎಸ್‌ಃ 258/2023** **ಪಿಡಬ್ಲೂ–2 ವಾಸುದೇವರಾವ್ ಎಸ್**

ದಿನಾಂಕಃ 19.01.2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಭೋಧಿಸಲಾಯಿತು.

**ಪಾಟಿ ಸವಾಲುಃ ಪ್ರತಿವಾದಿ ಪರ ಶ್ರೀ ಎಲ್ ಎಸ್ ವಕೀಲರಿಂದಃ**

ನನಗೆ ವಾದಿ ಚಿಕ್ಕಂದಿನಿಂದಲೂ ಪರಿಚಯ ಇರುತ್ತಾರೆ. ಪ್ರತಿವಾದಿ ನನಗೆ 30 ವರ್ಷದಿಂದ ಪರಿಚಯ ಇರುತ್ತಾರೆ. ನಿಪಿ 1 ರ ಕರಾರು ಪತ್ರಕ್ಕೆ ನಾನು ಸಹಿ ಮಾಡಿಲ್ಲ ಎಂದರೆ ಸರಿ. ನಿಪಿ 1 ರ ಕರಾರು ಪತ್ರದಲ್ಲಿ ಸಮಯ ನಿಗದಿ ಮಾಡಿದ ಬಗ್ಗೆ ನನಗೆ ಗೊತ್ತಿಲ್ಲ ಎಂದರೆ ಸರಿ. ದಾವಾ ಆಸ್ತಿಯ ಖರೀದಿಯ ವಿಚಾರ ನನಗೆ ಗೊತ್ತಿಲ್ಲದಿದ್ದರೂ ಸಹ ವಾದಿ ನನ್ನ ಸ್ನೇಹಿತರಾಗಿರುವುದರಿಂದ ವಾದಿಯ ಪರವಾಗಿ ನ್ಯಾಯಾಲಯದಲ್ಲಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ ಇಲ್ಲ.

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು)

ಓ ಹೇ ಕೇ ಸರಿ ಇದೆ

1ನೇ ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ. ಚಾಮರಾಜನಗರ.